## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ನಗರ ಬನಶಂಕರಿಯಲ್ಲಿರುವ ದಕ್ಷಿಣ ತಾಲ್ಲೂಕು ಪಂಚಾಯಿತಿ ಕಛೇರಿ ಆವರಣದಲ್ಲಿ ನಿರ್ಮಾಣಗೊಂಡಿರುವ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಆಡಳಿತ ಕಛೇರಿ ಕಟ್ಟಡ ನಿರ್ಮಾಣ ಕಾಮಗಾರಿಯ Workslip ಮತ್ತು EIRL ಪ್ರಸ್ತಾವನೆಗೆ ಅನುಮೋದನೆ ಹಾಗೂ ಮರು ಪರಿಷ್ಕೃತ ಅಂದಾಜು ಮೊತ್ತ ₹946.26 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ :**

1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ. ಮುಇಂ/ಪಂ.ರಾಇಂಇ/ತ್ವಗ್ರಾನೀಸ-3/ತಾಂಸ-2/ಸಿಂ-8/2012-13/2579, ದಿನಾಂಕ 28-06-2012.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 62 ಗ್ರಾಪಸ 2008, ದಿನಾಂಕ: 02-01-2009.

**ಪ್ರಸ್ತಾವನೆ :**

ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ನಗರ ಬನಶಂಕರಿಯಲ್ಲಿರುವ ದಕ್ಷಿಣ ತಾಲ್ಲೂಕು ಪಂಚಾಯಿತಿ ಕಛೇರಿ ಆವರಣದಲ್ಲಿ ನಿರ್ಮಾಣಗೊಂಡಿರುವ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಆಡಳಿತ ಕಚೇರಿ ಕಟ್ಟಡವನ್ನು ₹890.00 ಲಕ್ಷಗಳ ವೆಚ್ಚದಲ್ಲಿ ನಿರ್ಮಾಣ ಮಾಡಲು ಉಲ್ಲೇಖ (2) ರ ಸರ್ಕಾರಿ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

ಸದರಿ ಕಟ್ಟಡದ ಜಾಗವನ್ನು ಮಣ್ಣಿನಿಂದ ಮುಚ್ಚುವ ಬದಲು Cellar Floor ನಿರ್ಮಿಸುವ ಪ್ರಸ್ತಾವನೆಯನ್ನು ಪರಿಗಣಿಸಬಹುದಾಗಿರುತ್ತದೆ ಹಾಗೂ ಸದರಿ ಕಾಮಗಾರಿಯು ಪೂರ್ಣಗೊಂಡಿದ್ದು, Workslip ಮತ್ತು EIRL ಪ್ರಸ್ತಾವನೆಗೆ ಅನುಮೋದನೆ ಹಾಗೂ ಮರು ಪರಿಷ್ಕೃತ ಅಂದಾಜು ಮೊತ್ತ ₹946.26 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ರವರು ಉಲ್ಲೇಖ (1) ರ ಪತ್ರದಲ್ಲಿ ತಿಳಿಸಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ನಗರ ಬನಶಂಕರಿಯಲ್ಲಿರುವ ದಕ್ಷಿಣ ತಾಲ್ಲೂಕು ಪಂಚಾಯಿತಿ ಕಛೇರಿ ಆವರಣದಲ್ಲಿ ನಿರ್ಮಾಣಗೊಂಡಿರುವ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಆಡಳಿತ ಕಚೇರಿ ಕಟ್ಟಡ ನಿರ್ಮಾಣ ಕಾಮಗಾರಿಯ Workslip ಮತ್ತು EIRL ಪ್ರಸ್ತಾಪನೆಗೆ ಅನುಮೋದನೆ ಹಾಗೂ ಮರು ಪರಿಷ್ಕೃತ ಅಂದಾಜು ಮೊತ್ತ ₹946.26 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ.ಗ್ರಾಅಪ 49 ಗ್ರಾಪಸ 2012, ಬೆಂಗಳೂರು, ದಿನಾಂಕ: 16-07-2012.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ನಗರ ಬನಶಂಕರಿಯಲ್ಲಿರುವ ದಕ್ಷಿಣ ತಾಲ್ಲೂಕು ಪಂಚಾಯಿತಿ ಕಛೇರಿ ಆವರಣದಲ್ಲಿ

ನಿರ್ಮಾಣಗೊಂಡಿರುವ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಆಡಳಿತ ಕಚೇರಿ ಕಟ್ಟಡ ನಿರ್ಮಾಣ ಕಾಮಗಾರಿಯ Workslip ಮತ್ತು EIRL ಪ್ರಸ್ತಾಪನೆಗೆ ಅನುಮೋದನೆ ಹಾಗೂ ಮರು ಪರಿಷ್ಕೃತ ಅಂದಾಜು ಮೊತ್ತ ರೂ.946.26 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2011, ದಿನಾಂಕ: 28-09-2011 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಪ್ರದತ್ತವಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Radhakrishna 16/7/12

(ಕೆ. ರಾಧಾಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು (ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ.
4. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ.
5. ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ಜಿಲ್ಲಾ ಖಜಾನಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6, ವಿಧಾನ ಸೌಧ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು.
10. ನಿರ್ದೇಶಕರು (ಪಂ.ರಾಜ್) ರವರ ಆಪ್ತ ಸಹಾಯಕರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
11. ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.